ಅಭಿವೃದ್ಧಿ ಕಾಮಗಾರಿಯನ್ನು ಶ್ರೀ ಎಸ್.ಎಂ. ಜೈತಡೆ, ಗುತ್ತಿಗೆದಾರರು, ಸೋಲಾಪುರ್ ರವರಿಗೆ ವಹಿಸಲಾಗಿದ್ದು, ದಿನಾಂಕ: 26–12–2013 ರಂದು ಕಾಮಗಾರಿಯನ್ನು ಪ್ರಾರಂಭಿಸಲಾಗಿದೆ. ಸದರಿ ಕಾಮಗಾರಿಯ ವ್ಯಾಪ್ತಿಯು ಬಿಜಾಪುರ ಜಿಲ್ಲೆಯ ಇಂಡಿ, ಬಿಜಾಪುರ ಮತ್ತು ಸಿಂಧಗಿ ತಾಲ್ಲುಕುಗಳಲ್ಲಿ ಹರಡಿದ್ದು, ಗುತ್ತಿಗೆದಾರರು ಇಂಡಿ ಮತ್ತು ಬಿಜಾಪುರ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಈವರೆಗೆ ಕಾಮಗಾರಿ ನಿರ್ವಹಿಸುತ್ತಿದ್ದು, ಸಿಂಧಗಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಈಗ ಕಾಮಗಾರಿಯನ್ನು ಪ್ರಾರಂಭಿಸಿದ್ದು ಸುಮಾರು 1.50 ಕಿಮೀ. ಉದ್ದದ ರಸ್ತೆಯ ಅಭಿವೃದ್ಧಿ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಇ) ಕಾಮಗಾರಿಯು ಪ್ರಗತಿಯಲ್ಲಿರುವುದರಿಂದ ಗುತ್ತಿಗೆದಾರರನ್ನು ಬದಲಾಯಿಸುವ ಬಗ್ಗೆ ಕ್ರಮ ತೆಗೆದುಕೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಕಾಮಗಾರಿಯನ್ನು ದಿ:26–12–2013 ರಂದು ಪ್ರಾರಂಭಿಸಲಾಗಿದ್ದು, ಗುತ್ತಿಗೆ ಕರಾರಿನ ಪ್ರಕಾರ ಕೆಲಸದ ಅವಧಿ 11 ತಿಂಗಳುಗಳಾಗಿದ್ದು (ಮಳೆಗಾಲ ಸಹಿತ) ಕಾಮಗಾರಿಯನ್ನು ಅಂತಿಮ ದಿನಾಂಕವಾದ 25–11–2014ರ ಒಳಗೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

AE & JE ನೇಮಕಾತಿ ಮಾಡುವುದು

242(520); ಶ್ರೀ ಭೂಸನೂರ ರಮೇಶ್ ಬಾಳಪ್ಪ (ಸಿಂಧಗಿ)

ಅ) ಕೆ.ಪಿ.ಟಿ.ಸಿ.ಎಲ್.ನಲ್ಲಿ ಖಾಲಿ ಇರುವ ಜೆ.ಇ. ಮತ್ತು ಎ.ಇ. (ಸಹಾಯಕ ಅಭಿಯಂತರ ಮತ್ತು ಕಿರಿಯ ಅಭಿಯಂತರ) ಹುದ್ದೆಗಳನ್ನು ನೇಮಕಾತಿ ಮಾಡಲು ವಿಳಂಬಕ್ಕೆ ಕಾರಣಗಳೇನು;

ಆ) ಈಗಾಗಲೇ ಕರ್ನಾಟಕ ಸಾರ್ವಜನಿಕ ನೇಮಕಾತಿ (ಹೈದರಾಬಾದ್ ಕರ್ನಾಟಕ ವಲಯದ ನೇಮಕಾತಿ ಮೀಸಲಾತಿ) ಆದೇಶ 2013ರನ್ವಯ ಕೆ.ಪಿ.ಟಿ.ಸಿ.ಎಲ್.ನಲ್ಲಿ ನೇಮಕ ಪ್ರಕ್ರಿಯೆ ಕೈಗೆತ್ತಿಕೊಳ್ಳಲಾಗಿದ್ದು,

ಕೆ.ಪಿ.ಟಿ.ಸಿ.ಎಲ್.ನಲ್ಲಿ ನೇಮಕಾತಿ ಪ್ರಕ್ರಿಯೆ ಇದುವರೆಗೆ ಕೈಗೆತ್ತಿಕೊಳ್ಳದಿರುವುದಕ್ಕೆ ಕಾರಣಗಳೇನು;

ಇ) ನೇಮಾಕಾತಿಯನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ಹಾಗೂ ನೇಮಕಾತಿ ಯನ್ನು ಅಪ್ಟಿಟ್ಯೂಡ್ ಟೆಸ್ಟ್ (Aptitude Test) ಮೂಲಕ ಮಾಡಿಕೊಳ್ಳಲಾಗುವುದೇ; ಹಾಗೂ ಎಷ್ಟು ಹುದ್ದೆಗಳನ್ನು ನೇಮಕ ಮಾಡಲಾಗುವುದು; (ಸಂಪೂರ್ಣ ವಿವರ ಒದಗಿಸುವುದು)?

ಶ್ರೀ ಡಿ.ಕೆ. ಶಿವಕುಮಾರ್ (ಇಂಧನ ಸಚಿವರು)

ಅ) **ಮತ್ತು ಆ)** ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಮತ್ತು ಎಸ್ಕಾಂಗಳಲ್ಲಿ ಖಾಲಿ ಇರುವ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳ ಪೈಕಿ ಈ ಕೆಳಕಂಡ ಹುದ್ದೆಗಳನ್ನು ನೇರ ನೇಮಾಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮೋದನೆ ನೀಡಿದೆ:

ಹುದ್ದೆ	ಸಂಖ್ಯೆ
ಸಹಾಯಕ ಇಂಜಿನಿಯರ್ (ವಿ)	400
ಸಹಾಯಕ ಇಂಜಿನಿಯರ್ (ಸಿವಿಲ್)	10
ಕಿರಿಯ ಇಂಜಿನಿಯರ್ (ವಿ)	50

- ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್–ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ನಿಯಮಗಳು–2013 ರ ಅನ್ವಯ ಸ್ಥಳೀಯ ವ್ಯಕ್ತಿಗಳಿಗೆ ಹುದ್ದೆಗಳನ್ನು ಗುರುತಿಸಿ ಮೀಸಲಾತಿ ಕಲ್ಪಿಸಿ ಅಧಿಸೂಚನೆಯನ್ನು ಹೊರಡಿಸುವ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ ಬಡ್ತಿ ಮತ್ತು ನೇರ ನೇಮಕಾತಿ ಪ್ರಕ್ರಿಯೆಗಳನ್ನು ಸ್ಥಗಿತಗೊಳಿಸಲಾಗಿತ್ತು.

ಇ) ಹೈದರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಗೆ ಬರುವ ಹುದ್ದೆಗಳನ್ನು ಗುರುತಿಸಿ ನಿಯಮಾನುಸಾರ ಮೀಸಲಾತಿ ಕಲ್ಪಿಸಿ ಕೆ.ಪಿ.ಟಿ.ಸಿ.ಎಲ್.

ಸಂಸ್ಥೆಯು ದಿನಾಂಕ: 22.02.2014 ರಂದು ಅಧಿಸೂಚನೆ ಹೊರಡಿಸಿದೆ. ಅದರನ್ವಯ ಸ್ಥಳೀಯ ವೃಂದವನ್ನು ರಚಿಸಿ ಹಂಚಿಕೆ ಮತ್ತು ವ್ಯಕ್ತಿಗಳ ವರ್ಗಾವಣೆಯ ಪ್ರಕ್ರಿಯೆಯು ಚಾಲನೆಯಲ್ಲಿದ್ದು, ಪ್ರಕ್ರಿಯೆಯು ಪೂರ್ಣಗೊಂಡ ನಂತರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು.

ಕ.ವಿ.ಮಂ. ನೌಕರಿ ಭರ್ತಿ ಮತ್ತು ಬಡ್ತಿ ನಿಯಮಾವಳಿಗಳನ್ವಯ ಸಹಾಯಕ ಇಂಜಿನಿಯರ್ ಹಾಗೂ ಕಿರಿಯ ಇಂಜಿನಿಯರ್ ಹುದ್ದೆಗಳ ನೇರ ನೇಮಕಾತಿಗೆ Aptitude ಪರೀಕ್ಷೆಯ ಮೂಲಕ ನೇಮಕಾತಿಯನ್ನು ಮಾಡಿಕೊಳ್ಳಲಾಗುವುದು.

(ಅ) ರಲ್ಲಿ ನಮೂದಿಸಿರುವ ಎಲ್ಲಾ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡಿಕೊಳ್ಳಲಾಗುವುದು.

ಕೊಡಗು ಜಿಲ್ಲೆಯ ರಸ್ತೆಗಳ ದುರಸ್ತಿ

243(30); ಶ್ರೀ ಬೋಪಯ್ಯ ಕೆ.ಜಿ. (ವಿರಾಜಪೇಟೆ)

ಅ) 2013–14ನೇ ಸಾಲಿನಲ್ಲಿ ಮುಂಗಡ ಪತ್ರದಲ್ಲಿ ಕೊಡಗು ಜಿಲ್ಲೆಯ ರಸ್ತೆಗಳ ದುರಸ್ತಿಗೆ ಘೋಷಣೆ ಮಾಡಿರುವ ` 50.00ಕೋಟಿ ಮೊತ್ತದಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; ವಿವರ ಒದಗಿಸುವುದು; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ; ಕಾಮಗಾರಿಗಳ ಪೂರ್ಣ ವಿವರ ನೀಡುವುದು; ಒಂದು ವೇಳೆ ಕಾಮಗಾರಿಗಳನ್ನು ಪ್ರಾರಂಭಿಸದೇ ಇದ್ದಲ್ಲಿ ಕಾರಣಗಳನ್ನು ನೀಡುವುದು?